ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 21-07-2016

## ಪತ್ರಿಕಾ ಪ್ರಕಟಣೆ

# ಗ್ರಂಥಾಲಯ ಪುನರ್ ಆರಂಭ

ಬೆಂಗಳೂರು, ಜುಲೈ 21 (ಕರ್ನಾಟಕ ವಾರ್ತೆ)

ಬೆಂಗಳೂರು ಕಬ್ಬನ್ ಉದ್ಯಾನದಲ್ಲಿರುವ ನಗರ ಕೇಂದ್ರ ಗ್ರಂಥಾಲಯದ ಕಟ್ಟಡದ ನವೀಕರಣ ಕಾಮಗಾರಿ ಮುಕ್ತಾಯಗೊಂಡಿದ್ದು, ಗ್ರಂಥಾಲಯವು ಜುಲೈ 21 ರಿಂದ ಪುನರಾರಂಭಗೊಳ್ಳುತ್ತಿದ್ದು, ಗ್ರಂಥಾಲಯದ ಸದುಪಯೋಗವನ್ನು ಪಡೆದುಕೊಳ್ಳುವಂತೆ ಸಾರ್ವಜನಿಕ ಓದುಗರಲ್ಲಿ ಕೋರಿದೆ.

ಬಾಬು:ಜಿಪಿಆರ್.

# ಸಾರಿಗೆ ಅದಾಲತ್

ಬೆಂಗಳೂರು, ಜುಲೈ 21 (ಕರ್ನಾಟಕ ವಾರ್ತೆ)

ಬೆಂಗಳೂರು ಯಶವಂತಪುರದಲ್ಲಿರುವ ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯಲ್ಲಿ ಜುಲೈ 25 ರಂದು ಮಧ್ಯಾಹ್ನ 3-00 ಗಂಟೆಗೆ ಸಾರಿಗೆ ಅದಾಲತ್ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡು ತಮ್ಮ ಕುಂದುಕೊರತೆಗಳನ್ನು ಬಗೆಹರಿಸಿಕೊಳ್ಳಬಹುದೆಂದು ಸಾರಿಗೆ ಇಲಾಖೆ ಪ್ರಕಟಣೆ ತಿಳಿಸಿದೆ.

ಬಾಬು:ಜಿಪಿಆರ್.

# ಪರೀಕ್ಷೆಯಲ್ಲಿ ಫೇಲಾದ ವಿದ್ಯಾರ್ಥಿಗಳಿಗೆ ಮತ್ತೆ ತರಗತಿ ಅಭ್ಯಾಸಕ್ಕೆ ಅವಕಾಶ – ತನ್ವೀರ್ ಸೇಠ್

ಬೆಂಗಳೂರು, ಜುಲೈ 21 (ಕರ್ನಾಟಕ ವಾರ್ತೆ)

ಪ್ರಸ್ತುತ ಸಾಲಿನಿಂದ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ಮತ್ತೆ ತರಗತಿಗೆ ಸೇರಲು ಅವಕಾಶ ಕಲ್ಪಿಸುವ ಮಹತ್ವದ ನಿರ್ಧಾರವನ್ನು ರಾಜ್ಯ ಸರ್ಕಾರ ಕೈಗೊಂಡಿದೆ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ತನ್ವೀರ್ ಸೇಠ್ ತಿಳಿಸಿದರು.

ವಿಧಾನಸೌಧದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು ರಾಜ್ಯದಲ್ಲಿ 47 ಸಾವಿರ ಶಾಲೆಗಳಲ್ಲಿದ್ದು, ಬೆಂಗಳೂರು, ಕಲಬುರ್ಗಿ, ಬೆಳಗಾವಿ ವಿಭಾಗದ ಎಲ್ಲಾ ಶಾಲಾ ಮಕ್ಕಳಿಗೆ ಸಮವಸ್ತ್ರ ವಿತರಣೆ ಮಾಡಲಾಗಿದ್ದು ಮೈಸೂರು ಭಾಗದ ಕೆಲವು ಜಿಲ್ಲೆಗಳಲ್ಲಿ ವಿತರಣೆ ಬಾಕಿ ಇದ್ದು ಆದಷ್ಟು ಬೇಗ ಸಮವಸ್ತ್ರ ವಿತರಿಸಲಾಗುವುದು ಮುಂದಿನ ವರ್ಷದಿಂದ ರಾಜ್ಯದ ಕೈಮಗ್ಗ ನಿಗಮದಿಂದ ಸಮವಸ್ತ್ರ ಖರೀದಿಸಲು ಚಿಂತಿಸಲಾಗಿದೆ ಎಂದರು.

ಯಾವುದೇ ಸರ್ಕಾರಿ ಶಾಲೆಗಳನ್ನು ಮುಚ್ಚುವುದಿಲ್ಲ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರನ್ನು ನಿಯೋಜಿಸಲಾಗುವುದು. ಅಲ್ಲದೆ, ವಿಷಯವಾರು ಶಿಕ್ಷಕರ ನೇಮಕಕ್ಕಾಗಿ ಕ್ರಮಕೈಗೊಳ್ಳಲಾಗುವುದು. ಶಿಕ್ಷಕರ ವರ್ಗಾವಣೆ ನೀತಿಯಲ್ಲಿ ಸ್ವಲ್ಪ ಗೊಂದಲಗಳಿದ್ದು ಅದನ್ನು ಸರಿಪಡಿವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಈ ತಿಂಗಳ ಅಂತ್ಯದೊಳಗೆ ವಿದ್ಯಾರ್ಥಿಗಳಿಗೆ, ಸೈಕಲ್ ವಿತರಣೆ, ಪುಸ್ತಕ ವಿತರಣೆ ಕಾರ್ಯ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು.

ಇಲಾಖೆಯಲ್ಲಿ ಬಾಕಿ ಉಳಿದಿರುವ ಕಡತಳ ವಿಲೇವಾರಿಗೆ ಸೂಚನೆ ನೀಡಿ ಆದೇಶ ಹೊರಡಿಸಲಾಗಿದೆ ರಾಜ್ಯದಲ್ಲಿ 22 ಸಾವಿರ ಶಿಕ್ಷಕರ ಕೊರತೆ ಇದ್ದು, ಮುಂದಿನ ಎರಡು ವರ್ಷಗಳಲ್ಲಿ ನಿವೃತ್ತರಾಗುವ ಶಿಕ್ಷಕರ ಸಂಖ್ಯೆಯನ್ನು ಆಧರಿಸಿ ನೇಮಕಾತಿಗೆ ಪ್ರಸ್ತಾವನೆ ಸಲ್ಲಿಸಲಾಗುವುದು

ಈ ವರ್ಷ 13 ಸಾವಿರ ಅತಿಥಿ ಶಿಕ್ಷಕರ ನೇಮಕಮಾಡಿಕೊಳ್ಳಲಾಗುವುದು ಎಂದು ಶಿಕ್ಷಣ ಸಚಿವ ತನ್ವೀರ್ ಸೇಠ್ ಇದೇ ಸಂದರ್ಭದಲ್ಲಿ ತಿಳಿಸಿದರು.

ಬಾಬು:ಕೆಪಿಪಿ:ಜಿಪಿಆರ್.

# ಅನುಪಾಲನಾ ಗೃಹ ಆರಂಭಿಸಲು ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 21 (ಕರ್ನಾಟಕ ವಾರ್ತೆ)

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ 2016-17 ನೇ ಸಾಲಿನಲ್ಲಿ 18 ವರ್ಷಕ್ಕಿಂತ ಮೇಲ್ಪಟ್ಟ ನಿರಾಶ್ರಿತ ಬುದ್ದಿಮಾಂದ್ಯ ಪುರುಷ ಹಾಗೂ ಕಾಳಜಿ ವಹಿಸುವುದಕ್ಕಾಗಿ ಮತ್ತು ಸಂರಕ್ಷಣೆಗಾಗಿ ಮೈಸೂರು, ಕಲಬುರಗಿ ಹಾಗೂ ಬೆಳಗಾವಿ ವಿಭಾಗದ; ಯಾವುದೇ ಜಿಲ್ಲೆಯಲ್ಲಿ ಅನುಪಾಲನಾ ಗೃಹಗಳನ್ನು ಪ್ರಾರಂಭಿಸಲು ಸ್ವಯಂಸೇವಾ ಸಂಸ್ಥೆಗಳಿಂದ ಆಸಕ್ತಿ ಕೋರಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಆಗಸ್ಟ್ 10 ರೊಳಗೆ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಪೋಡಿಯಂ ಬ್ಲಾಕ್, ವಿ.ವಿ. ಕೇಂದ್ರ, ನೆಲಮಹಡಿ, ಬೆಂಗಳೂರು – 560 001 ಇವರಿಗೆ ಸಲ್ಲಿಸಬೇಕು.

ಅರ್ಜಿ ನಮೂನೆ ಹಾಗೂ ಹೆಚ್ಚಿನ ವಿವರಗಳಿಗೆ ನಿರ್ದೇಶನಾಲಯ, ವಿಕಲಚೇತನರ ಹಾಗೂ ಹಿರಿಯ ನಾಗರಿಕ ರ ಸಬಲೀಕರಣ ಇಲಾಖೆ, ಬೆಂಗಳೂರು ಇವರಿಂದ ದೂರವಾಣಿ ಸಂಖ್ಯೆ 080–22860907/22866046 ಹಾಗೂ ಇಲಾಖೆಯ ವೆಬ್‌ಸೈಟ್ **welfareofdisabled.kar.nic.in** ರಲ್ಲಿ ಸಂಪರ್ಕಿಸಿ ಪಡೆಯಬಹುದಾಗಿದೆ.

ಬಾಬು:ಜಿಪಿಆರ್.

# ಕುಡಿಯುವ ನೀರು ಪರ್ಯಾಯ ಮಾರ್ಗಕ್ಕೆ ಸಚಿವರ ಪರಿಶೀಲನೆ

ಬೆಂಗಳೂರು, ಜುಲೈ 21 (ಕರ್ನಾಟಕ ವಾರ್ತೆ)

ಕರ್ನಾಟಕವು ನದಿ ಮೂಲದ (**surface water**) ನೀರಿನ ತೀವ್ರ ಕೊರತೆ ಎದುರಿಸುತ್ತಿದ್ದು, ದಿನೇ ದಿನೇ ಜಲಸಂಗ್ರಹಾಗಾರಗಳ ಮಟ್ಟ ಕುಸಿಯುತ್ತಿರುವುದರಿಂದ, ಪರ್ಯಾಯ ಮಾರ್ಗವಾಗಿ ಉತ್ತರ ಚೆನ್ನೈನ ಕಟ್ಟುಪಳ್ಳಿಯ ಬಳಿ ಸಮುದ್ರದ ಉಪ್ಪು ನೀರನ್ನು ಡಿ–ಸ್ಯಾಲಿನೇಷನ್ ಮಾಡಿ ಕುಡಿಯಲು ಯೋಗ್ಯಗೊಳಿಸಿ ಉಪಯೋಗಿಸುತ್ತಿರುವ ಘಟಕವನ್ನು ಚೆನ್ನೈನ ಮೆಟ್ರೋಪಾಲಿಟನ್ ನೀರು ಸರಬರಾಜು ಮಂಡಳಿಯ ಸಹಯೋಗದೊಂದಿಗೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಆಯೋಜಿಸಿದ ಪರಿವೀಕ್ಷಣೆಗೆ ನಗರಾಭಿವೃದ್ಧಿ ಹಾಗೂ ವಕ್ಫ್ ಸಚಿವ ರೋಷನ್ ಬೇಗ್ ಭೇಟಿಯಿತ್ತು ಪರಿವೀಕ್ಷಿಸಿದರು.

ಬಂಗಾಳಕೊಲ್ಲಿಯ ಕರಾವಳಿ ಪ್ರದೇಶದಲ್ಲಿ ಉತ್ತರ ಚೆನ್ನೈನ ಕಟ್ಟುಪಳ್ಳಿ ಬಳಿ 60 ಎಕರೆ ಪ್ರದೇಶದಲ್ಲಿ ಸ್ಥಾಪಿಸಿರುವ ಮಿಂಜೂರು ಸಮುದ್ರ ನೀರು ಡೆ–ಸ್ಯಾಲಿನೇಷನ್ ಘಟಕವು (ರಿವರ್ಸ್ ಆಸ್ಮಾಸಿಸ್) ಭಾರತದಲ್ಲೇ ಅತಿ ದೊಡ್ಡ ಬೃಹತ್ ಪ್ರಮಾಣದ ಘಟಕವಾಗಿದ್ದು, ಈ ಘಟಕದಿಂದ ಉತ್ಪಾದಿಸುವ ಯೋಗ್ಯ ನೀರನ್ನು ಎನ್ನೋರ್ ಬಂದರಿಗೆ ಮತ್ತು ಉತ್ತರ ಚೆನ್ನೈನ ಶಾಖೋತ್ಪನ್ನ ಘಟಕಕ್ಕೆ ಸರಬರಾಜು ಮಾಡಲಾಗುತ್ತಿದೆ. ತೀವ್ರ ಬರಗಾಲದಲ್ಲಿ ಸಮೀಪವಿರುವ ನಗರ ಪ್ರದೇಶಗಳ ಸುಮಾರು 10..00 ಲಕ್ಷ ಜನ ಸಂಖ್ಯೆಗೆ ಕೂಡ ನೀರನ್ನು ಸರಬರಾಜು ಮಾಡಲಾಗುತ್ತಿದೆ.

ಕರ್ನಾಟಕದ ಕರಾವಳಿ ಪ್ರದೇಶದ ಜನತೆಗೆ ಕುಡಿಯುವ ನೀರಿನ ಬೇಗೆ ತೀರಿಸಲು ಹಾಗೂ ವರ್ಷಪೂರ್ತಿ ನಿರಂತರ ನೀರನ್ನು ಸರಬರಾಜು ಮಾಡಲು ಸಮುದ್ರ ನೀರನ್ನು ಡಿ–ಸ್ಯಾಲಿನೇಷನ್ ಮಾಡಿ ಪರ್ಯಾಯ ವ್ಯವಸ್ಥೆಯಾಗಿ ಸರಬರಾಜು ಮಾಡಲು ಎದುರು ನೋಡುತ್ತಿದ್ದೇವೆ ಎಂದು ಸಚಿವ ರೋಷನ್‌ಬೇಗ್ ತಿಳಿಸಿದರು.

ಬಾಬು/ಕೆಎಂ